**All India Radio: Bangalore**
**National Bulletin In Kannada**
**14.03.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ಅಸ್ಸಾಂನಲ್ಲಿ ೨೩ ಸಾವಿರದ ೫೫೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಶಂಕುಸ್ಥಾಪನೆ
2. ಇಸ್ರೋದಿಂದ ಸಿಇ-೨೦ ಕ್ರಯೋಜೆನಿಕ್ ಇಂಜಿನ್ ಪರೀಕ್ಷೆ ಯಶಸ್ವಿ - ಕೇಂದ್ರ ಸಚಿವ ಜಿತೇಂದ್ರ ಸಿಂಗ್ ಶ್ಲಾಘನೆ
3. ಭಾರತದಲ್ಲಿ ಸಿಲುಕಿರುವ ವಿದೇಶಿ ಪ್ರಜೆಗಳಿಗೆ ದುಬೈನಲ್ಲಿರುವ ಭಾರತೀಯ ದೂತಾವಾಸ ಕಚೇರಿಯಿಂದ ವೀಸಾ ವಿನಾಯಿತಿ ಘೋಷಣೆ
4. ಕರ್ನಾಟಕದ ಮಂಡ್ಯದಲ್ಲಿ ೧೪ ಕೋಟಿ ರೂಪಾಯಿ ವೆಚ್ಚದ ನೂತನ ಕ್ರೀಡಾಂಗಣ ಕಾಮಗಾರಿಗೆ ಕೇಂದ್ರ ಸಚಿವ ಮನ್ಸುಖ್ ಮಾಂಡವೀಯ ಚಾಲನೆ
5. ಎಫ್ಐಎಚ್ ಮಹಿಳಾ ಹಾಕಿ ವಿಶ್ವಕಪ್ ೨೦೨೬ರ ಅರ್ಹತಾ ಪಂದ್ಯಾವಳಿ: ಫೈನಲ್‌ನಲ್ಲಿಂದು ಭಾರತ - ಇಂಗ್ಲೆಂಡ್ ಸೆಣಸು

<><><><>

ಪ್ರಧಾನಿ ನರೇಂದ್ರ ಮೋದಿ ಇಂದು ಅಸ್ಸಾಂನ ಸಿಲ್ಚಾರ್‌ಗೆ ಭೇಟಿ ನೀಡಿ ೨೩ ಸಾವಿರದ ೫೫೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಿದ್ದಾರೆ. ಪ್ರಧಾನಮಂತ್ರಿಯ ಅವರು ಇಂದು ಸಿಲ್ಚಾರ್‌ನ ಅಂಬಿಕಾಪುರದಲ್ಲಿ ಮೂರು ಯೋಜನೆಗಳಿಗೆ 'ಭೂಮಿ ಪೂಜೆ' ನೆರವೇರಿಸಿದರು. ಇವುಗಳಲ್ಲಿ, ೨೨ ಸಾವಿರದ ೮೬೪ ಕೋಟಿ ರೂಪಾಯಿಗಳ ಅಂದಾಜು ವೆಚ್ಚದ ಸಿಲ್ಚಾರ್ ಹೈ-ಸ್ಪೀಡ್ ಕಾರಿಡಾರ್, ಸುಮಾರು ೫೬೫ ಕೋಟಿ ರೂಪಾಯಿಗಳ ಅಂದಾಜು ವೆಚ್ಚದ ಸಿಲ್ಚಾರ್ ಟೌನ್ ಮೇಲ್ಸೇತುವೆ ಮತ್ತು ೧೨೨ ಕೋಟಿ ರೂಪಾಯಿಗಳ ಅಂದಾಜು ವೆಚ್ಚದ ಪಥರ್ಕಂಡಿ ಕೃಷಿ ಮಹಾವಿದ್ಯಾಲಯ ಶಂಕುಸ್ಥಾಪನೆ ನೆರವೇರಿಸಿದರು. ಬಳಿಕ ಮಾತನಾಡಿದ ಅವರು, ರಸ್ತೆ, ರೈಲು ಅಥವಾ ಕೃಷಿ ಮಹಾವಿದ್ಯಾಲಯದಂತಹ ಮೂಲಸೌಕರ್ಯ ಅಭಿವೃದ್ಧಿ, ಪರಾಗ್ ಕಣಿವೆಯನ್ನು ಈಶಾನ್ಯ ಭಾರತದ ಸರಕು ಮತ್ತು ವ್ಯಾಪಾರ ಕೇಂದ್ರವಾಗುವತ್ತ

ದಾಪುಗಾಲು ಹಾಕುತ್ತಿದೆ. ಇದರಿಂದಾಗಿ ಇಲ್ಲಿನ ಯುವಕರಿಗೆ ಹೆಚ್ಚಿನ ಉದ್ಯೋಗಾವಕಾಶ ವಿಶೇಷವಾಗಿ ಸ್ವ-ಉದ್ಯೋಗಕ್ಕೆ ಹೆಚ್ಚಿನ ಅವಕಾಶ ದೊರೆಯಲಿದೆ. ಇಂದು ಈಶಾನ್ಯ ಪ್ರದೇಶದ ಭಾರತದ ಆಕ್ಟ್ ಈಸ್ಟ್ ನೀತಿಯ ಕೇಂದ್ರ ಬಿಂದುವಾಗಿದೆ. ದಕ್ಷಿಣ ಪೂರ್ವ ಏಷ್ಯಾದೊಂದಿಗೆ ಭಾರತವನ್ನು ಜೋಡಿಸುವ ಸಂಪರ್ಕ ಸೇತುವೆಯಾಗುತ್ತಿದೆ ಎಂದು ಹೇಳಿದರು.

ಧ್ವನಿ: ಪಿಎಂ (೨೮ ಸೆಕೆಂಡ್‌ಗಳು)

ಅಸ್ಸಾಂ ಭೇಟಿಯ ಮೊದಲ ದಿನವಾದ ನಿನ್ನೆ ಪ್ರಧಾನಿ, ಸುಮಾರು ೧೯ ಸಾವಿರದ ೬೮೦ ಕೋಟಿ ರೂಪಾಯಿಗಳ ಹಲವು ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸುವ ಜೊತೆಗೆ ರಾಷ್ಟ್ರಕ್ಕೆ ಸಮರ್ಪಿಸಿದರು. ಆಯಿಲ್ ಇಂಡಿಯಾ ಲಿಮಿಟೆಡ್‌ನ ನುಮಲಿಗಢ-ಸಿಲಿಗುರಿ ಉತ್ಪನ್ನ ಪೈಪ್‌ಲೈನ್‌ನ ಸಾಮರ್ಥ್ಯ ವರ್ಧನೆ ಯೋಜನೆಯನ್ನು ಅವರು ರಾಷ್ಟ್ರಕ್ಕೆ ಸಮರ್ಪಿಸಿದರು.

<><><><>

ಪ್ರಧಾನಿ ನರೇಂದ್ರ ಮೋದಿ ಇಂದು ಕೋಲ್ಕತ್ತಾಗೂ ಭೇಟಿ ನೀಡಲಿದ್ದು, ಸುಮಾರು ೧೮ ಸಾವಿರದ ೬೮೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ, ಶಂಕುಸ್ಥಾಪನೆ ನೆರವೇರಿಸಿ, ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ. ಈ ಪ್ರದೇಶದ ರಸ್ತೆ, ಮೂಲಸೌಕರ್ಯಕ್ಕೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಸುಮಾರು ೧೬ ಸಾವಿರದ ೯೯೦ ಕೋಟಿ ರೂಪಾಯಿ ವೆಚ್ಚದ ಒಟ್ಟು ೪೨೦ ಕಿಲೋಮೀಟರ್ ಉದ್ದದ ಹಲವು ರಾಷ್ಟ್ರೀಯ ಹೆದ್ದಾರಿ ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ತಮ್ಮ ಭೇಟಿಯ ವೇಳೆ ಪ್ರಧಾನಿ, ಹಡಗು ಸಾಗಾಣೆ ಮತ್ತು ಬಂದರು ಸಂಬಂಧಿತ ಯೋಜನೆಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ರೈಲ್ವೆ ವಲಯದಲ್ಲಿ ಪ್ರಧಾನಿ ಪುರುಲಿಯಾ-ಆನಂದ್‌ವಿಹಾರ್ ಟರ್ಮಿನಲ್-ದೆಹಲಿ ಎಕ್ಸ್‌ಪ್ರೆಸ್ ರೈಲಿಗೆ ಹಸಿರು ನಿಶಾನೆ ತೋರಲಿದ್ದು, ಇದರಿಂದ ಪಶ್ಚಿಮಬಂಗಾಳ, ಉತ್ತರಪ್ರದೇಶ, ಬಿಹಾರ, ಜಾರ್ಖಂಡ್ ಮತ್ತು ರಾಷ್ಟ್ರ ರಾಜಧಾನಿ ನಡುವೆ ರೈಲು ಸಂಪರ್ಕ ಬಲಗೊಳ್ಳಲಿದೆ. ಇದೇ ವೇಳೆ ಪ್ರಧಾನಿ ಅಮೃತ್ ನಿಲ್ದಾಣ್ ಯೋಜನೆಯಡಿ ಆರು ಪುನರ್ ಅಭಿವೃದ್ಧಿಗೊಳಿಸಲಾದ ಆರು ರೈಲು ನಿಲ್ದಾಣಗಳನ್ನು ಉದ್ಘಾಟಿಸಲಿದ್ದಾರೆ. ಭೇಟಿಯ ಭಾಗವಾಗಿ ಪ್ರಧಾನಿ, ಬಿಜೆಪಿ ಆಯೋಜಿಸಿರುವ ಸಾರ್ವಜನಿಕ

ರ್‍ಯಾಲಿಯನ್ನುದ್ದೇಶಿಸಿ ಮಾತನಾಡಲಿದ್ದು, ಇದರೊಂದಿಗೆ ಪಶ್ಚಿಮಬಂಗಾಳದಲ್ಲಿ ಮುಂಬರುವ ವಿಧಾನಸಭಾ ಚುನಾವಣೆಗೆ ಪ್ರಚಾರ ಕಾರ್ಯಕ್ಕೂ ಚಾಲನೆ ದೊರೆಯಲಿದೆ.

<><><><>

ತಮಿಳುನಾಡಿನ ಮಹೇಂದ್ರಗಿರಿಯಲ್ಲಿರುವ ಇಸ್ರೋ ಪ್ರೊಪಲ್ಶನ್ ಕಾಂಪ್ಲೆಕ್ಸ್‌ನಲ್ಲಿ ೨೨ ಟನ್ ಸಾಮರ್ಥ್ಯದ ಸಿಇ-೨೦ ಕ್ರಯೋಜೆನಿಕ್ ಇಂಜಿನ್ ಪರೀಕ್ಷೆ ಯಶಸ್ವಿಯಾಗಿ ನಡೆದಿದ್ದು, ಈ ಸಾಧನೆಗಾಗಿ ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್, ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ - ಇಸ್ರೋಗೆ ಅಭಿನಂದನೆ ತಿಳಿಸಿದ್ದಾರೆ. ನಳಿಕೆ ಸಂರಕ್ಷಣಾ ವ್ಯವಸ್ಥೆ ಮತ್ತು ಮಲ್ಟಿ ಎಲಿಮೆಂಟ್ ಇಗ್ನೈಟರ್ ತಂತ್ರಜ್ಞಾನಗಳನ್ನೊಳಗಂಡ ಈ ಪರೀಕ್ಷೆ ಯಶಸ್ವಿಯಾಗಿದೆ. ಈ ಯಶಸ್ಸು ದೇಶದ ಸುಧಾರಿತ ಕ್ರಯೋಜೆನಿಕ್ ಪ್ರೊಪಲ್ಶನ್ ಸಾಮರ್ಥ್ಯವನ್ನು ಬಲಪಡಿಸುವಲ್ಲಿ ಪ್ರಮುಖ ಮೈಲಿಗಲ್ಲಾಗಿದೆ. ಇದರ ಜೊತೆಗೆ ಇಸ್ರೋದ ಅತ್ಯಂತ ಸದೃಢ ಉಡ್ಡಯನ ನೌಕೆಯಾದ ಎಲ್‌ವಿಎನ್-೩ಯ ವಿಶ್ವಾಸಾರ್ಹತೆಯನ್ನು ಹೆಚ್ಚಿಸಲಿದೆ ಎಂದು ಸಚಿವರು ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

<><><><>

ಪಶ್ಚಿಮ ಏಷ್ಯಾದಲ್ಲಿ ಉಂಟಾಗಿರುವ ಪ್ರಸ್ತುತ ವಿದ್ಯಮಾನಗಳಿಂದಾಗಿ ಭಾರತದಲ್ಲಿ ಸಿಲುಕಿರುವ ವಿದೇಶಿ ಪ್ರಜೆಗಳಿಗೆ ದುಬೈನಲ್ಲಿರುವ ಭಾರತೀಯ ದೂತಾವಾಸ ಕಚೇರಿ ಮಹತ್ವದ ವಿನಾಯಿತಿ ಘೋಷಿಸಿದೆ. ಬಾಧಿತ ವಿದೇಶಿ ಪ್ರಜೆಗಳ ಸಮಾನ್ಯ ವೀಸಾ ಮತ್ತು ಇ-ವೀಸಾಗಳ ಅವಧಿಯನ್ನು ವಿಸ್ತರಿಸಲಾಗಿದ್ದು, ನಿಗದಿತ ಅವಧಿಗಿಂತ ಹೆಚ್ಚುಕಾಲ ಉಳಿದುಕೊಂಡಿದ್ದಕ್ಕಾಗಿ ವಿಧಿಸಲಾಗುವ ದಂಡವನ್ನು ಮನ್ನ ಮಾಡಲಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ದೂತಾವಾಸ ಕಚೇರಿ ಮಾಹಿತಿ ನೀಡಿದೆ. ಬಾಧಿತ ವಿದೇಶಿಯರ ಅರ್ಹತೆಯನ್ನು ಪರಿಶೀಲಿಸಿ, ಉಚಿತವಾಗಿ ಒಂದು ತಿಂಗಳ ಅವಧಿಗೆ ವೀಸಾವನ್ನು ವಿಸ್ತರಿಸಲಾಗುವುದು ಎಂದು ಕಚೇರಿ ತಿಳಿಸಿದೆ.

<><><><>

ಖೇಲೋ ಇಂಡಿಯಾ ಯೋಜನೆಯಡಿ ಕರ್ನಾಟಕದ ಮಂಡ್ಯ ತಾಲೂಕಿನ ವಿ.ಸಿ.ಫಾರಂನಲ್ಲಿ ೧.೫ ಎಕರೆ ಜಾಗದಲ್ಲಿ ೧೪ ಕೋಟಿ ರೂಪಾಯಿ ವೆಚ್ಚದ ಸುಸಜ್ಜಿತ ಬಹುಪಯೋಗಿ ನೂತನ ಕ್ರೀಡಾಂಗಣ ಕಾಮಗಾರಿಗೆ ಕೇಂದ್ರ ಯುವಜನ ಸೇವೆ, ಕ್ರೀಡೆ, ಉದ್ಯೋಗ ಹಾಗೂ ಕಾರ್ಮಿಕ ಸಚಿವ ಮನ್ಸುಖ್ ಮಾಂಡವೀಯ  ಚಾಲನೆ ನೀಡಿದರು. ಇದರ ಜೊತೆಗೆ ಸಿ.ಆರ್.ಎಸ್, ನಿಧಿ ಮೂಲಕ ಮಂಡ್ಯ

ಜಿಲ್ಲೆಯ ೩೮೮ ಮಂದಿ ವಿಶೇಷಚೇತನರಿಗೆ ಎಲೆಕ್ಟ್ರಾನಿಕ್ ವಾಹನ, ಸರ್ಕಾರಿ ಶಾಲೆ ಹಾಗೂ ಕಾಲೇಜುಗಳಿಗೆ ಉಚಿತ ಕಂಪ್ಯೂಟರ್ ಮತ್ತು ಲ್ಯಾಪ್ ಟಾಪ್ ವಿತರಣೆ ಹಾಗೂ ಸರ್ಕಾರಿ ಆಸ್ಪತ್ರೆಗಳಿಗೆ ಉಚಿತ ಆಂಬುಲೆನ್ಸ್ ವಿತರಣೆಗೆ ಕೇಂದ್ರ ಉಕ್ಕು ಹಾಗೂ ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಚಾಲನೆ ನೀಡಿದರು. ಬಳಿಕ ಧಾರವಾಡಕ್ಕೆ ಪ್ರಯಾಣ ಬೆಳೆಸಲಿರುವ ಕೇಂದ್ರ ಸಚಿವ ಮನ್ಸುಖ್ ಮಾಂಡವೀಯ ನಗರದಲ್ಲಿ ನೂತನವಾಗಿ ನಿರ್ಮಾಣವಾಗಿರುವ ಕ್ರೀಡಾಸಂಕೀರ್ಣ ಮತ್ತು ಅಂತಾರಾಷ್ಟ್ರೀಯ ಮಟ್ಟದ ಈಜುಕೊಳ ಲೋಕಾರ್ಪಣೆಗೊಳಿಸಲಿದ್ದಾರೆ. ೫೦ ಕೋಟಿ ರೂಪಾಯಿ ಅನುದಾನದಡಿ ಈ ಕ್ರೀಡಾಸಂಕೀರ್ಣ ಮತ್ತು ಈಜುಕೊಳವನ್ನು ನಿರ್ಮಿಸಲಾಗಿದೆ.

<><><>

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಪಂಜಾಬ್‌ನ ಮೋಗಾ ಜಿಲ್ಲೆಯಲ್ಲಿ ನಡೆಯಲಿರುವ ರ್‍ಯಾಲಿಯಲ್ಲಿ ಭಾಗಿಯಾಗಲಿದ್ದಾರೆ. 'ಬದ್ಲಾವ್ ರ್‍ಯಾಲಿ' ಎಂದು ಹೆಸರಿಸಲಾದ ಈ ರ್‍ಯಾಲಿ ಮುಂದಿನ ವರ್ಷದ ವಿಧಾನಸಭಾ ಚುನಾವಣೆಗೆ ಮುನ್ನ ಗಡಿ ರಾಜ್ಯ ಪಂಜಾಬ್‌ನಲ್ಲಿ ಬಿಜೆಪಿಯ ರಾಜಕೀಯ ಪ್ರಚಾರದ ಭಾಗವಾಗಿದೆ. ರ್‍ಯಾಲಿಯಲ್ಲಿ ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ರವನೀತ್ ಸಿಂಗ್ ಬಿಟ್ಟು ಮತ್ತು ಹಿರಿಯ ರಾಜ್ಯ ಬಿಜೆಪಿ ನಾಯಕರು ಭಾಗಿಯಾಗಲಿದ್ದಾರೆ.

<><><>

ದೇಶದ ಎಲ್ಲಾ ಸೂಕ್ಷ್ಮ ಅಲ್ಪಸಂಖ್ಯಾತ ಸಮುದಾಯಗಳ ಕಲ್ಯಾಣ ಮತ್ತು ಹಿತರಕ್ಷಣೆ ಕೇಂದ್ರ ಸರ್ಕಾರದ ಬದ್ಧತೆಯಾಗಿದೆ ಎಂದು ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ತಿಳಿಸಿದ್ದಾರೆ. ಈ ಸಮುದಾಯಗಳ ಗುರುತಿಸುವಿಕೆ ಮತ್ತು ರಕ್ಷಣೆಯ ಅಗತ್ಯದ ಕುರಿತು ಬಿಜೆಪಿ ನಾಯಕ ರಾಜೀವ್ ಚಂದ್ರಶೇಖರ್ ಅವರಿಂದ ಮನವಿ ಸ್ವೀಕರಿಸಿ ನಂತರ ಸಚಿವರು ಸಾಮಾಜಿಕ ಜಾಲತಾಣದಲ್ಲಿ ಈ ವಿಷಯ ಹಂಚಿಕೊಂಡಿದ್ದಾರೆ. ಸರ್ಕಾರದ ಎಲ್ಲಾ ಯೋಜನೆಗಳನ್ನು ಪಾರದರ್ಶಕ, ನ್ಯಾಯಯುತ ಮತ್ತು ಒಳಗೊಳ್ಳುವ ರೀತಿಯಲ್ಲಿ ಜಾರಿಗೊಳಿಸಲಾಗುತ್ತಿದ್ದು, ಸಣ್ಣ ಮತ್ತು ದುರ್ಬಲ ವರ್ಗಗಳಿಗೆ ಆದ್ಯತೆ ನೀಡಲಾಗುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಕಳೆದ ವರ್ಷದ ಸೆಪ್ಟೆಂಬರ್‌ನಲ್ಲಿ ರಾಷ್ಟ್ರೀಯ ಭದ್ರತಾ ಕಾಯ್ದೆಯಡಿ ಬಂಧನಕ್ಕೊಳಗಾಗಿದ್ದ ಲಡಾಖ್‌ನ ಪ್ರಮುಖ ಹೋರಾಟಗಾರ ಸೋನಮ್ ವಾಂಗ್‌ಚುಕ್ ಅವರ ಬಂಧನ ಆದೇಶವನ್ನು ಸರ್ಕಾರ

ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಿದೆ. ಲಡಾಖ್ ಪ್ರಾಂತ್ಯದಲ್ಲಿ ಶಾಂತಿ, ಸ್ಥಿರತೆ ಮತ್ತು ಪರಸ್ಪರ ನಂಬಿಕೆಯ ವಾತಾವರಣವನ್ನು ನಿರ್ಮಿಸಲು ಸರ್ಕಾರ ಬದ್ಧವಾಗಿದೆ ಎಂದು ಗೃಹ ಸಚಿವಾಲಯ ತಿಳಿಸಿದೆ.

<><><><>

ಇರಾಕ್ ರಾಜಧಾನಿ ಬಾಗ್ದಾದ್‌ನ ಅತ್ಯಂತ ಸುರಕ್ಷಿತ ವಲಯವಾದ ಗ್ರೀನ್ ಝೋನ್‌ನಲ್ಲಿರುವ ಅಮೆರಿಕ ರಾಯಭಾರ ಕಚೇರಿಯ ಮೇಲೆ ನಿನ್ನೆ ರಾತ್ರಿ ಕ್ಷಿಪಣಿ ದಾಳಿ ನಡೆದಿದೆ. ಪ್ರಮುಖವಾಗಿ ಹೆಲಿಪ್ಯಾಡ್ ಮೇಲೆ ದಾಳಿ ನಡೆದಿದೆ. ಇರಾಕ್ ರಾಜಧಾನಿಯ ಮೇಲೆ ದಾಳಿ ನಡೆಸುತ್ತಿದ್ದ ವೇಳೆ ಇರಾನ್ ಬೆಂಬಲಿತ ಯೋಧರಿಬ್ಬರು ಮೃತಪಟ್ಟ ಬೆನ್ನಲ್ಲೇ ಈ ದಾಳಿ ನಡೆಸಲಾಗಿದೆ ಎಂದು ವರದಿಯಾಗಿದೆ. ಈ ಕುರಿತು ಬಾಗ್ದಾದ್‌ನಲ್ಲಿರುವ ಅಮೆರಿಕ ರಾಯಭಾರ ಕಚೇರಿ ಯಾವುದೇ ಅಧಿಕೃತ ಪ್ರತಿಕ್ರಿಯೆ ನೀಡಿಲ್ಲ.

<><><><>

ಹೈದರಾಬಾದ್‌ನಲ್ಲಿಂದು ನಡೆಯಲಿರುವ ಎಫ್‌ಐಎಚ್ ಮಹಿಳಾ ಹಾಕಿ ವಿಶ್ವಕಪ್ ೨೦೨೬ರ ಅರ್ಹತಾ ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿ ಭಾರತದ ಸಲೀಮಾ ಟೇಟೆ ನೇತೃತ್ವದ ತಂಡ ಇಂಗ್ಲೆಂಡ್ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ನಿನ್ನೆ ನಡೆದ ಸೆಮಿಫೈನಲ್ ಪಂದ್ಯದಲ್ಲಿ ಭಾರತ ತಂಡ, ಇಟಲಿ ತಂಡವನ್ನು ೧-೦ ಅಂತರದಲ್ಲಿ ಮಣಿಸಿ, ಫೈನಲ್‌ಗೆ ಲಗ್ಗೆ ಇಟ್ಟಿದೆ. ಭಾರತದ ಪರ ಮನೀಶಾ ಚೌಹಾಣ್ ೪೫ ನಿಮಿಷದಲ್ಲಿ ಗೆಲುವಿನ ಗೋಲು ದಾಖಲಿಸಿ, ತಂಡಕ್ಕೆ ಗೆಲುವು ತಂದುಕೊಟ್ಟರು. ಫೈನಲ್‌ಗೆ ಪ್ರವೇಶ ಪಡೆದ ಬೆನ್ನಲ್ಲೇ ಭಾರತ ಮತ್ತು ಇಂಗ್ಲೆಂಡ್ ತಂಡಗಳು ಮುಂಬರುವ ಹಾಕಿ ವಿಶ್ವಕಪ್‌ನಲ್ಲಿ ಸ್ಥಾನ ಖಚಿತಪಡಿಸಿವೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>